ಹಾಸನದಿಂದ ಕ್ಯಾಲಿಕಟ್‌ಗೆ ಅಂತರರಾಜ್ಯ ಕೆ.ಎಸ್.ಆರ್.ಟಿ.ಸಿ. ಬಸ್

232 (556) ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ):–

ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಾಸನದಿಂದ ಕೇರಳದ ಕ್ಯಾಲಿಕಟ್‌ಗೆ ಅಂತರರಾಜ್ಯ ಬಸ್ ವ್ಯವಸ್ಥೆಯು ಕೆ.ಎಸ್.ಆರ್.ಟಿ.ಸಿ.ಯಿಂದ ಮಂಜೂರಾಗಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಅದನ್ನು ಏಕೆ ಪ್ರಾರಂಭಿಸಿರುವುದಿಲ್ಲ ಹಾಗೂ ಅದನ್ನು ಯಾವಾಗ ಪ್ರಾರಂಭಿಸಲಾಗುವುದು ?

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು):–

ಅ) ಹೌದು

ಆ) ತೆರಿಗೆ ವಿನಾಯಿತಿ ಅಧಿಸೂಚನೆಯನ್ನು ಹೊರಡಿಸಿದ ನಂತರ ಸೇವೆಯನ್ನು ಪ್ರಾರಂಭಿಸಲಾಗುವುದು.

ಕೊಡಗು ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ

229 (559) ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ):–

ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೊಡು ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ಒಟ್ಟು ಎಷ್ಟು ಹುದ್ದೆಗಳು ಖಾಲಿ ಇವೆ;

ಆ) ಹಾಗಿದ್ದಲ್ಲಿ ಅದನ್ನು ಭರ್ತಿ ಮಾಡದಿರಲು ಕಾರಣವೇನು ಹಾಗೂ ಯಾವಾಗ ಭರ್ತಿ ಮಾಡಲಾಗುವುದು ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು):–

ಅ) ಕೊಡಗು ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ಒಟ್ಟು 103 ಹುದ್ದೆಗಳು ಖಾಲಿ ಇವೆ.

ಆ) ಈ ಹುದ್ದೆಗಳಲ್ಲಿ ಕೆಲವು ಹೊಸದಾಗಿ ಸೃಷ್ಟಿಸಲಾಗಿದ್ದು, ಗ್ರೂಪ್–ಎ ಮತ್ತು ಸಿ ವೃಂದಗಳ ಹುದ್ದೆಗಳನ್ನು ತುಂಬುವ ಬಗ್ಗೆ ಸರ್ಕಾರದಿಂದ ಕ್ರಮ ಕೈಗೊಳ್ಳಲಾಗುತ್ತಿದೆ. ಬಡ್ತಿಯಿಂದ ಖಾಲಿ ಇರುವ ಹಾಗೂ ಗ್ರೂಪ್– 'ಡಿ' ವೃಂದದಲ್ಲಿ ಖಾಲಿಯಿರುವ ಹುದ್ದೆಗಳನ್ನು ಈಗಾಗಲೇ ಪೊಲೀಸ್ ಅಧೀಕ್ಷಕರಿಂದ ಬಡ್ತಿ ಮತ್ತು ಸಂದರ್ಶನದ ಮೂಲಕ ತುಂಬಲಾಗುತ್ತಿದೆ.

ಕೊಡಗು ಜಿಲ್ಲೆಗೆ ಮಲೆನಾಡು ಅಭಿವೃದ್ಧಿ ಮಂಡಲಿಯಿಂದ ಹಣ ಬಿಡುಗಡೆ

230 (558) ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ):–

ಪರಿಸರ ಮತ್ತು ಜೀವ ಪರಿಸರ ಶಾಸ್ತ್ರ ಹಾಗೂ ವಿಜ್ಞಾನ, ತಂತ್ರಜ್ಞಾನ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೊಡಗು ಜಿಲ್ಲೆಗೆ ಮಲೆನಾಡು ಅಭಿವೃದ್ಧಿ ಮಂಡಳಿಯಿಂದ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ವಿವರ ಒದಗಿಸುವುದು);